ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಎಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027. ಭಾರತ
ದೂರವಾಣಿ : 080-22221321 / 22221325
ವೆಬ್-ಸೈಟ್ : www.ksrtc.in

Karnataka State Road Transport Corporation
"Transport House" Central Offices,
K.H.Road, Shanthinagar, Bangalore-560 027.India
Tel : 080-22221321 / 25
Website : www.ksrtc.in

ಸಂಖ್ಯೆ: ಕರಾಸಾ/ಕೇಕ/ಆಡಳತ/ಎ3/ 770/2020-21 ದಿನಾಂಕ: 24-02-2021

## : ಸುತ್ತೋಲೆ ಸಂಖ್ಯೆ :1687:

**ವಿಷಯ:** ಅಧಿಕಾರಿ/ನೌಕರರು ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದಿದ್ದಕ್ಕಾಗಿ ಭರಿಸಿದ ವೈದ್ಯಕೀಯ ವೆಚ್ಚಗಳ ಮರುಪಾವತಿ ಮಾಡುವ ಕುರಿತು.

**ಉಲ್ಲೇಖ:** 1) ಸುತ್ತೋಲೆ ಸಂಖ್ಯೆ: 1203 ದಿನಾಂಕ: 01/07/1999.
2) ನಿರ್ದೇಶಕ ಮಂಡಳಿಯ ಠರಾವು ಸಂಖ್ಯೆ: 10208 ದಿನಾಂಕ: 05/01/2021

-- ***-- -

ನಿಗಮದ ನೌಕರರು ನಿಗಮದಿಂದ ಮಾನ್ಯತೆ ಪಡೆಯದ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದ ಪ್ರಕರಣಗಳಲ್ಲಿ ವೈದ್ಯಕೀಯ ವೆಚ್ಚ ಮರುಪಾವತಿ ಕುರಿತು ಉಲ್ಲೇಖ-1ರ ಸುತ್ತೋಲೆಯಲ್ಲಿ ಮಾರ್ಗದರ್ಶನಗಳನ್ನು ನೀಡಲಾಗಿರುತ್ತದೆ. ಪ್ರಸ್ತುತ, ನಿಗಮದಿಂದ ಮಾನ್ಯತೆ ಪಡೆಯದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ಪ್ರಕರಣಗಳಲ್ಲಿ ವೈದ್ಯಕೀಯ ವೆಚ್ಚವನ್ನು ಮರುಪಾವತಿ ಮಾಡಲು ದರ ಪಟ್ಟಿಯಲ್ಲಿ ದರ ಲಭ್ಯವಿಲ್ಲದೆ ವೈದ್ಯಕೀಯ ವೆಚ್ಚ ಮರುಪಾವತಿ ಮಾಡಲು ಸಾಧ್ಯವಾಗದಿರುವುದು ಕಂಡು ಬಂದಿರುತ್ತದೆ.

ಈ ಹಿನ್ನೆಲೆಯಲ್ಲಿ, ನಿಗಮದ ಅಧಿಕಾರಿ/ನೌಕರರು "ನಿಗಮದಿಂದ ಮಾನ್ಯತೆ ಪಡೆಯದ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದ ಪ್ರಕರಣಗಳಲ್ಲಿ, ಚಿಕಿತ್ಸಾ ವೆಚ್ಚ ಮರುಪಾವತಿಗೆ ದರಪಟ್ಟಿಯಲ್ಲಿ ದರ ಲಭ್ಯವಿಲ್ಲದಿದ್ದ ಪಕ್ಷದಲ್ಲಿ, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರು ಅಥವಾ ಸರ್ಕಾರದಿಂದ ನಿಗದಿಪಡಿಸುವ ಮೊತ್ತವನ್ನು ಮರುಪಾವತಿಗೆ ಮಂಜೂರು ಮಾಡಲು ವ್ಯವಸ್ಥಾಪಕ ನಿರ್ದೇಶಕರು, ಕ.ರಾ.ರ.ಸಾ.ನಿಗಮ ರವರಿಗೆ ಅಧಿಕಾರ ಪ್ರತ್ಯಾಯೋಜಿಸುವ ಪ್ರಸ್ತಾವನೆಗೆ ನಿಗಮದ ನಿರ್ದೇಶಕರ ಮಂಡಳಿಯು ಠರಾವು ಸಂಖ್ಯೆ: 10208/444ನೇ ಸಭೆ ದಿನಾಂಕ: 05/01/2021 ರಲ್ಲಿ ಅನುಮೋದನೆ ನೀಡಿರುತ್ತದೆ."

ಸಂಬಂಧಪಟ್ಟವರೆಲ್ಲರೂ ಮೇಲಿನ ಆದೇಶವನ್ನು ಗಮನದಲ್ಲಿಟ್ಟುಕೊಂಡು ಅದರಂತೆ ಸೂಕ್ತ ಕ್ರಮಕೈಗೊಳ್ಳತಕ್ಕದ್ದು.

ಈ ಸುತ್ತೋಲೆಯು ತಕ್ಷಣದಿಂದ ಜಾರಿಗೆ ಬರುತ್ತದೆ.

(ಶಿವಯೋಗಿ ಸಿ. ಕಳಸದ, ಭಾ.ಆ.ಸೇ.,)
ವ್ಯವಸ್ಥಾಪಕ ನಿರ್ದೇಶಕರು

Scanned with CamScanner

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಅಧ್ಯಕ್ಷರು/ಉಪಾಧ್ಯಕ್ಷರು, ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಆಪ್ತ ಕಾರ್ಯದರ್ಶಿಯವರಿಗೆ.
2. ವ್ಯವಸ್ಥಾಪಕ ನಿರ್ದೇಶಕರು, ಬೆಂ.ಮ.ಸಾ.ಸಂಸ್ಥೆ/ವಾ.ಕ.ರ.ಸಾ.ಸಂಸ್ಥೆ/ಈ.ಕ.ರ.ಸಾ.ಸಂಸ್ಥೆ ರವರಿಗೆ.
3. ನಿರ್ದೇಶಕರು(ಸಿ:ಪ)/ ನಿರ್ದೇಶಕರು(ಭ:ಜಾ), ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ.
4. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂ.ಮ.ಸಾ.ಸಂಸ್ಥೆ/ವಾ.ಕ.ರ.ಸಾ.ಸಂಸ್ಥೆ/ಈ.ಕ.ರ.ಸಾ.ಸಂಸ್ಥೆ ರವರಿಗೆ.

**ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:**

5. ಎಲ್ಲಾ ಇಲಾಖಾ ಮುಖ್ಯಸ್ಥರುಗಳು, ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ.
6. ಎಲ್ಲಾ ಹಿರಿಯ ವಿ.ನಿ.,/ವಿಭಾಗೀಯ ನಿಯಂತ್ರಣಾಧಿಕಾರಿ/ಕಾರ್ಯ ವ್ಯವಸ್ಥಾಪಕರು, ಪ್ರಾದೇಶಿಕ ಕಾರ್ಯಾಗಾರ/ ಪ್ರಾಂಶುಪಾಲರು, ತರಬೇತಿ ಕೇಂದ್ರಗಳು, ಕ.ರಾ.ರ.ಸಾ.ನಿಗಮ ರವರುಗಳಗೆ.
7. ಉಪ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ.
8. ಮುಖ್ಯ ಭದ್ರತಾ ಮತ್ತು ಜಾಗ್ರತಾಧಿಕಾರಿ, ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸದರಿ ಸುತ್ತೋಲೆಯನ್ನು ಕೇಂದ್ರ ಕಛೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸಿ, ಪ್ರದರ್ಶಿತಗೊಂಡ ಬಗ್ಗೆ ಈ ಕಛೇರಿಗೆ ತಪ್ಪದೆ ವರದಿ ಸಲ್ಲಿಸುವುದು.
9. ಮುಖ್ಯ ಗಣಕ ವ್ಯವಸ್ಥಾಪಕರು, ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸದರಿ ಸುತ್ತೋಲೆಯನ್ನು ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಿ, ಪ್ರಕಟಿಸಿರುವ ಬಗ್ಗೆ ಈ ಕಛೇರಿಗೆ ಮಾಹಿತಿಯನ್ನು ತಪ್ಪದೆ ಕಳುಹಿಸುವುದು.
10. ಪ್ರಧಾನ ಕಛೇರಿ ಪತ್ರ ಕಡತ.

Scanned with CamScanner